# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 290 |
| ಉತ್ತರಿಸಬೇಕಾದ ದಿನಾಂಕ | : 06.03.2025 |
| ಸದಸ್ಯರ ಹೆಸರು | : ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷದಲ್ಲಿ ಬೀದರ್ ಜಿಲ್ಲೆಯ ತಾಲ್ಲೂಕು ಮತ್ತು ಮಂಡಲ ಪಂಚಾಯಿತಿ ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು; (ವರ್ಷವಾರು ಮಾಹಿತಿ ನೀಡುವುದು) | ಕಳೆದ 3 ವರ್ಷದಲ್ಲಿ ಬೀದರ್ ಜಿಲ್ಲೆಯ ಹುಮ್ನಾಬಾದ್ ಮತ್ತು ಔರಾದ್ ತಾಲ್ಲೂಕು ಕ್ರೀಡಾಂಗಣಗಳ ಅಭಿವೃದ್ಧಿಗಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ರೂ.214.96 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. |
| ಆ) | ಬಿಡುಗಡೆ ಮಾಡಿದ ಅನುದಾನದಲ್ಲಿ ಯಾವ ತಾಲ್ಲೂಕು ಮತ್ತು ಮಂಡಲ ಪಂಚಾಯಿತಿ ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಅನುದಾನ ನೀಡಲಾಗಿದೆ; (ಹೆಸರು ಸಹಿತ ಮಾಹಿತಿ ನೀಡುವುದು) | ಕಳೆದ 3 ವರ್ಷದಲ್ಲಿ ಬೀದರ್ ಜಿಲ್ಲೆಯ ತಾಲ್ಲೂಕು ಮಟ್ಟದ ಕ್ರೀಡಾಂಗಣಗಳ ನಿರ್ಮಾಣಕ್ಕೆ ಬಿಡುಗಡೆ ಮಾಡಿರುವ ಅನುದಾನದ ವಿವರ ಈ ಕೆಳಕಂಡಂತಿದೆ.<br>• 2021-22 ನೇ ಸಾಲಿನಲ್ಲಿ ಔರಾದ್ ತಾಲ್ಲೂಕು ಒಳಾಂಗಣ ಕ್ರೀಡಾಂಗಣವನ್ನು ರೂ.200.00 ಲಕ್ಷಗಳ ವೆಚ್ಚದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ನಿರ್ಮಿಸಲಾಗಿರುತ್ತದೆ.<br>• 2023-24 ನೇ ಸಾಲಿನಲ್ಲಿ ಹುಮ್ನಾಬಾದ್ ತಾಲ್ಲೂಕು ಕ್ರೀಡಾಂಗಣದ ಆವರಣದಲ್ಲಿ ಷಟಲ್ ಬ್ಯಾಡ್ಮಿಂಟನ್ ಅಂಕಣಕ್ಕೆ ಸಿಂಥೆಟಿಕ್ ಮ್ಯಾಟ್‌ನ್ನು ರೂ.14.96 ಲಕ್ಷಗಳ ವೆಚ್ಚದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಅಳವಡಿಸಲಾಗಿದೆ.<br>• ಮಂಡಲ ಪಂಚಾಯಿತಿ ಮಟ್ಟದ ಕ್ರೀಡಾಂಗಣಗಳಿಗೆ ಯಾವುದೇ ಅನುದಾನ ನೀಡಿರುವುದಿಲ್ಲ. |
| ಇ) | ಈ ಜಿಲ್ಲೆಯಲ್ಲಿ ಹೊಸದಾಗಿ ತಾಲ್ಲೂಕು ಮತ್ತು ಮಂಡಲ ಪಂಚಾಯಿತಿ ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಪ್ರಸ್ತಾವನೆ ಏನಾದರೂ ಬಂದಿದೆಯೇ? (ಬಂದಿದ್ದಲ್ಲಿ ವಿವರ ನೀಡುವುದು) | ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ಕ್ರೀಡಾಂಗಣ ನಿರ್ಮಾಣಕ್ಕೆ ಸಂಬಂಧಿಸಿದಂತೆ 2024-25 ನೇ ಸಾಲಿನಲ್ಲಿ ಸ್ವೀಕರಿಸಲಾದ ಪ್ರಸ್ತಾವನೆಗಳ ವಿವರ ಈ ಕೆಳಕಂಡಂತಿದೆ:<br>• ಬೀದರ್ ಜಿಲ್ಲೆಯ ಭಾಲ್ಕಿ ಕ್ರೀಡಾಂಗಣ ನಿರ್ಮಾಣಕ್ಕಾಗಿ ಭೂಮಿ ಖರೀದಿಗಾಗಿ ರೂ.209.92 ಲಕ್ಷಗಳಿಗೆ ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br>• ಬೀದರ್ ಜಿಲ್ಲೆಯ ಬಸವಕಲ್ಯಾಣ ಮತ್ತು ಹುಮ್ನಾಬಾದ್ ತಾಲ್ಲೂಕು ಕ್ರೀಡಾಂಗಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ಕೈಕೊಳ್ಳಲು ರೂ.214.00 ಲಕ್ಷಗಳಿಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ. |

ವೈಎಸ್ ಡಿ-ಇಬಿಬಿ/18/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ

<u>**ಕರ್ನಾಟಕ ವಿಧಾನ ಪರಿಷತ್ತು**</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 212
ಉತ್ತರಿಸಬೇಕಾದ ದಿನಾಂಕ : 06.03.2025
ಸದಸ್ಯರ ಹೆಸರು : ಶ್ರೀ ಸಿ.ಟಿ ರವಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಒಳಾಂಗಣ ಕ್ರೀಡಾಂಗಣ ಹಾಗೂ ಫುಟ್ಬಾಲ್ ಟರ್ಫ್ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ಮಂಜೂರಾತಿ ದೊರೆತಿದ್ದು ಯಾವಾಗ; ಈ ಕಾಮಗಾರಿಗಳಿಗೆ ಮಂಜೂರಾಗಿದ್ದ ಅನುದಾನವೆಷ್ಟು; | <u>**ಚಿಕ್ಕಮಗಳೂರು ನಗರದ ಕಲ್ಯಾಣ ನಗರದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗಳ ವಿವರ ಕೆಳಕಂಡಂತಿದೆ:-**</u><br>• ಚಿಕ್ಕಮಗಳೂರು ನಗರದ ಕಲ್ಯಾಣ ನಗರ ಕ್ರೀಡಾಂಗಣದಲ್ಲಿ 7-00 ಎಕರೆ ನಿವೇಶನವಿದ್ದು, ಸದರಿ ಕ್ರೀಡಾಂಗಣದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ಕೇಂದ್ರ ಸರ್ಕಾರದಿಂದ ಖೇಲೋ ಇಂಡಿಯಾ ಯೋಜನೆಯಡಿ 2020-21 ನೇ ಸಾಲಿನಲ್ಲಿ ರೂ.448.00 ಲಕ್ಷಗಳಿಗೆ ಮಂಜೂರಾತಿ ನೀಡಲಾಗಿದೆ. ಪ್ರಸ್ತುತ ಕಾಮಗಾರಿ ಪೂರ್ಣಗೊಂಡಿದೆ.<br>• ಈ ಒಳಾಂಗಣ ಕ್ರೀಡಾಂಗಣದಲ್ಲಿ ವೀಕ್ಷಕರ ಗ್ಯಾಲರಿ ಕಾಮಗಾರಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ರೂ.60.00 ಲಕ್ಷಗಳಿಗೆ ದಿನಾಂಕ:14-04-2022ರಲ್ಲಿ ಮಂಜೂರಾತಿ ನೀಡಲಾಗಿದ್ದು, ಪ್ರಸ್ತುತ ಕಾಮಗಾರಿ ಪೂರ್ಣಗೊಂಡಿದೆ.<br>• ಕಲ್ಯಾಣನಗರ ಒಳಾಂಗಣ ಕ್ರೀಡಾಂಗಣದ ಕಾಮಗಾರಿಯು ಪ್ರಗತಿಯಲ್ಲಿದ್ದ ಸಂದರ್ಭದಲ್ಲಿ ತಳಪಾಯದಲ್ಲಿ ಅತೀ ಹೆಚ್ಚು ನೀರಿನ ತೇವಾಂಶ ಇರುವುದರಿಂದ ಅನುಮೋದಿತ ವಿನ್ಯಾಸವನ್ನು ಮಾರ್ಪಾಡು ಮಾಡಿಕೊಂಡು ತಳಪಾಯವನ್ನು ಭದ್ರಪಡಿಸುವುದು, ಜಿ.ಐ. ಶೀಟ್, ಟ್ರಸ್ ರೂಫ್ ಅಳವಡಿಸುವ ಹೆಚ್ಚುವರಿ ಕಾಮಗಾರಿಗೆ ರಾಜ್ಯ ವಲಯದಿಂದ ರೂ.111.55 ಲಕ್ಷಗಳಿಗೆ ದಿನಾಂಕ:25-01-2023 ರಲ್ಲಿ ಮಂಜೂರಾತಿ ನೀಡಲಾಗಿದ್ದು, ಪ್ರಸ್ತುತ ಕಾಮಗಾರಿ ಪೂರ್ಣಗೊಂಡಿದೆ.<br>• 2024-25 ನೇ ಸಾಲಿನಲ್ಲಿ ಈ ಒಳಾಂಗಣ ಕ್ರೀಡಾಂಗಣದ ಬಾಸ್ಕೆಟ್‌ಬಾಲ್ ಅಂಕಣಕ್ಕೆ ಮರದ ನೆಲಹಾಸು ಅಳವಡಿಸುವುದು ಮತ್ತು ಇತರೆ ಅಭಿವೃದ್ಧಿ ಕಾಮಗಾರಿಗೆ ರೂ.103.00 ಲಕ್ಷಗಳು ಮಂಜೂರಾಗಿದ್ದು, ಪ್ರಸ್ತುತ ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.<br><br><u>**ಚಿಕ್ಕಮಗಳೂರು ಜಿಲ್ಲೆಯ ಕಲ್ಯಾಣನಗರ ಕ್ರೀಡಾಂಗಣದಲ್ಲಿ ಫುಟ್ಬಾಲ್ ಕೃತಕ ಹುಲ್ಲುಹಾಸಿನ ಅಂಕಣ ನಿರ್ಮಾಣ**</u><br><br>• ಚಿಕ್ಕಮಗಳೂರು ಜಿಲ್ಲೆಯ ಕಲ್ಯಾಣನಗರ ಕ್ರೀಡಾಂಗಣದಲ್ಲಿ ರೂ.450.00 ಲಕ್ಷ ವೆಚ್ಚದಲ್ಲಿ ಫುಟ್ಬಾಲ್ |

| | | |
|---|---|---|
| | | ಟರ್ಫ್ ಅಳವಡಿಕೆ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ:ವೈಎಸ್‌ಡಿ/33/ ಇಪಿಇ 2022, ದಿನಾಂಕ:21-01-2023 ರನ್ವಯ ಮಂಜೂರಾತಿ ನೀಡಲಾಗಿದೆ. ಪ್ರಸ್ತುತ ಸದರಿ ಕಾಮಗಾರಿಯು ಅಂತಿಮ ಹಂತದಲ್ಲಿರುತ್ತದೆ. |
| ಆ) | ಈ ಕಾಮಗಾರಿಗಳು ಪ್ರಾರಂಭವಾಗಿದ್ದು ಹಾಗೂ ಮುಕ್ತಾಯಗೊಳಿಸುವುದು ಯಾವಾಗ; | • ದಿನಾಂಕ:16-09-2021 ರಂದು ಕಲ್ಯಾಣನಗರದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಕಾಮಗಾರಿಯು ಪ್ರಾರಂಭಗೊಂಡಿದ್ದು, ಬಾಸ್ಕೆಟ್‌ಬಾಲ್ ಅಂಕಣಕ್ಕೆ ಮರದ ನೆಲಹಾಸು ಅಳವಡಿಸುವುದು ಮತ್ತು ವಿದ್ಯುದೀಕರಣ ಕಾಮಗಾರಿಗಳನ್ನು ಆಗಸ್ಟ್-2025ರ ಅಂತ್ಯದೊಳಗಾಗಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.<br>• ದಿನಾಂಕ:16-12-2023 ರಂದು ಫುಟ್ಬಾಲ್ ಟರ್ಫ್ ಅಂಕಣ ನಿರ್ಮಿಸುವ ಕಾಮಗಾರಿಯು ಪ್ರಾರಂಭಗೊಂಡಿದ್ದು, ಪ್ರಸ್ತುತ ಪೆವಿಲಿಯನ್ ಕಟ್ಟಡ ಕಾಮಗಾರಿಯು ಬಾಕಿ ಇದ್ದು, ಏಪ್ರಿಲ್-2025ರ ಅಂತ್ಯಕ್ಕೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.<br>• ಚಿಕ್ಕಮಗಳೂರು ಜಿಲ್ಲೆಯಲ್ಲಿ ಉಂಟಾದ ಅತಿವೃಷ್ಟಿಯಿಂದಾಗಿ ಸದರಿ ಕಾಮಗಾರಿಗಳು ಪೂರ್ಣಗೊಳ್ಳುವಲ್ಲಿ ವಿಳಂಬವಾಗಿರುತ್ತದೆ. |
| ಇ) | ಈ ಕಾಮಗಾರಿಗಳು ಇದುವರೆಗೂ ಪೂರ್ಣಗೊಳ್ಳದೆ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು; | |
| ಈ) | ಈ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು? | |

ವೈಎಸ್ ಡಿ-ಇಬಿಬಿ/16/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 249 |
| ಉತ್ತರಿಸಬೇಕಾದ ದಿನಾಂಕ | : 06.03.2025 |
| ಸದಸ್ಯರ ಹೆಸರು | : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ಜಿಲ್ಲಾ ಕೇಂದ್ರವನ್ನು ಹೊರತುಪಡಿಸಿ ಕ್ರೀಡಾಂಗಣ ಸೌಲಭ್ಯದಿಂದ ವಂಚಿತವಾಗಿರುವ ತಾಲ್ಲೂಕುಗಳಾವುವು; | ಕೊಪ್ಪಳ ಜಿಲ್ಲೆಯಲ್ಲಿ ಹೊಸದಾಗಿ ರಚನೆಯಾದ ತಾಲ್ಲೂಕುಗಳಾದ ಕನಕಗಿರಿ, ಕಾರಟಗಿ ಮತ್ತು ಕುಕನೂರು ತಾಲ್ಲೂಕುಗಳಲ್ಲಿ ಸದ್ಯ ಕ್ರೀಡಾಂಗಣಗಳು ಇರುವುದಿಲ್ಲ. |
| ಆ) | ಸದರಿ ಜಿಲ್ಲೆಯ ತಾಲ್ಲೂಕುಗಳಿಗೆ ತಾಲ್ಲೂಕು ಕ್ರೀಡಾಂಗಣವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಕೊಪ್ಪಳ ಜಿಲ್ಲೆಯ ಕುಕನೂರು ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲು 9 ಎಕರೆ 26 ಗುಂಟೆ ಜಮೀನನ್ನು ಭೂ ಸ್ವಾಧೀನಪಡಿಸಿಕೊಳ್ಳಲು ಅನುಮತಿ ನೀಡಿ, ಭೂ ಸ್ವಾಧೀನಕ್ಕೆ ಅವಶ್ಯವಿರುವ ರೂ.71.84 ಲಕ್ಷಗಳನ್ನು ಬಿಡುಗಡೆ ಮಾಡಿ ದಿ:16-11-2021 ರಂದು ಸರ್ಕಾರವು ಆದೇಶಿಸಿದೆ. ಅದರಂತೆ ರೂ.71.84 ಲಕ್ಷಗಳನ್ನು ದಿನಾಂಕ:26-11-2021 ರಂದು ಉಪವಿಭಾಗಾಧಿಕಾರಿಗಳು, ಕೊಪ್ಪಳ ಜಿಲ್ಲೆ ರವರಿಗೆ ಬಿಡುಗಡೆ ಮಾಡಲಾಗಿರುತ್ತದೆ. ಆದರೆ ಸದರಿ ಭೂ ಸ್ವಾಧೀನ ಪ್ರಕ್ರಿಯೆಯ ಐ-ತೀರ್ಪು ಮೊತ್ತಕ್ಕೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡದಲ್ಲಿ ರಿಟ್ ಅರ್ಜಿ ಸಂಖ್ಯೆ: 100694/2023 ದಾಖಲಾಗಿದ್ದು, ಇದುವರೆಗೂ ನಿವೇಶನವು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರವಾಗಿರುವುದಿಲ್ಲ.<br><br>ಕೊಪ್ಪಳ ಜಿಲ್ಲೆಯಲ್ಲಿ ಹೊಸದಾಗಿ ರಚನೆಯಾದ ತಾಲ್ಲೂಕುಗಳಾದ ಕನಕಗಿರಿ ಮತ್ತು ಕಾರಟಗಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಸೂಕ್ತ ನಿವೇಶನ ಗುರುತಿಸಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸುವಂತೆ ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ ಇವರನ್ನು ಕೋರಲಾಗಿದ್ದು, ಸೂಕ್ತ ನಿವೇಶನ ಇದುವರೆಗೆ ಲಭ್ಯವಾಗಿರುವುದಿಲ್ಲ. |
| ಇ) | ಕೊಪ್ಪಳ ಜಿಲ್ಲೆಯ ತಾಲ್ಲೂಕು ಕೇಂದ್ರಗಳಲ್ಲಿ ಯಾವ ಕಾಲಮಿತಿಯೊಳಗೆ ಕ್ರೀಡಾಂಗಣಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು? | ಕುಕನೂರು ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ಪ್ರಕರಣ ಇತ್ಯರ್ಥವಾದ ನಂತರ ನಿವೇಶನವನ್ನು ಹಸ್ತಾಂತರಿಸಿಕೊಂಡು, ಕ್ರೀಡಾಂಗಣ ನಿರ್ಮಾಣಕ್ಕೆ ಅನುದಾನದ ಲಭ್ಯತೆ ಮೇರೆಗೆ ಕ್ರಮ ವಹಿಸಲಾಗುವುದು.<br><br>ಕೊಪ್ಪಳ ಜಿಲ್ಲೆಯಲ್ಲಿ ಹೊಸದಾಗಿ ರಚನೆಯಾದ ತಾಲ್ಲೂಕುಗಳಾದ ಕನಕಗಿರಿ ಮತ್ತು ಕಾರಟಗಿ ತಾಲ್ಲೂಕುಗಳಲ್ಲಿ ಸೂಕ್ತ ನಿವೇಶನವು ಯುವ |

| | | |
|---|---|---|
| | | ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರವಾದ ನಂತರ ಅನುದಾನ ಲಭ್ಯತೆಯ ಅನುಸಾರವಾಗಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಮುಂದಿನ ಕ್ರಮವಹಿಸಲಾಗುವುದು. |

ವೈಎಸ್ ಡಿ-ಇಬಿಬಿ/14/2025

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ

# ಕರ್ನಾಟಕದ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 304 |
| ಉತ್ತರಿಸಬೇಕಾದ ದಿನಾಂಕ | 06.03.2025 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ-48ರ ಪಕ್ಕದಲ್ಲಿ ಹೊಸ ಜಿಲ್ಲಾಮಟ್ಟದ ಕ್ರೀಡಾಂಗಣವನ್ನು ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು. ಸದರಿ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆಯೇ: | ಇಲ್ಲ |
| ಆ) | ಇದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವ ಕಾಲ ಮಿತಿಯಲ್ಲಿ ಪ್ರಾರಂಭಿಸಲಾಗುವುದು ಮತ್ತು ಪೂರ್ಣಗೊಳಿಸಲಾಗುವುದು ಯಾವಾಗ: | ಬೆಳಗಾವಿ ನಗರದಲ್ಲಿ ಹೊಸ ಜಿಲ್ಲಾ ಕ್ರೀಡಾಂಗಣವನ್ನು ಒಟ್ಟಾರೆ 16 ಎಕರೆ 37 ಗುಂಟೆ ನಿವೇಶನದಲ್ಲಿ ಲೋಕೋಪಯೋಗಿ ಇಲಾಖೆಯ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ನಿರ್ಮಿಸಲು ದಿನಾಂಕ:21.02.2025 ರಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅನುಮೋದನೆ ನೀಡಿರುತ್ತದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಹೊಸ ಜಿಲ್ಲಾ ಕ್ರೀಡಾಂಗಣ ಸಮುಚ್ಚಯ ನಿರ್ಮಾಣಕ್ಕೆ ಮಂಜೂರಾಗಿರುವ ನಿವೇಶವನ್ನು ಸರ್ವೇ ಮಾಡಿಸಿ, ಎಲ್ಲಾ ರೀತಿಯ ಹೊರಾಂಗಣ ಮತ್ತು ಒಳಾಂಗಣ ಕ್ರೀಡೆಗಳಿಗೆ ಸಂಬಂಧಿಸಿದ ಸೌಕರ್ಯಗಳನ್ನು ಕಲ್ಪಿಸಲು ಮಾಸ್ಟರ್ ಪ್ಲಾನ್ ತಯಾರಿಸಿ, ಲೋಕೋಪಯೋಗಿ ಇಲಾಖೆಗೆ ಒದಗಿಸಲು ಕ್ರಮ ವಹಿಸಲಾಗುತ್ತಿದೆ. ಮಾಸ್ಟರ್ ಪ್ಲಾನ್ ರೂಪಿಸಿದ ನಂತರ ವಿವರವಾದ ಅಂದಾಜು ಪಟ್ಟಿಯನ್ನು ತಯಾರಿಸಿ, ನಿಯಮಾನುಸಾರ ಲೋಕೋಪಯೋಗಿ ಇಲಾಖೆ ವತಿಯಿಂದ ಟೆಂಡರ್ ಆಹ್ವಾನಿಸಿ, ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |
| ಇ) | ಬೆಳಗಾವಿ ಜಿಲ್ಲೆಯ ಯಲ್ಲೂರು ಗ್ರಾಮದ ಹತ್ತಿರ ಸುಮಾರು 66 ಎಕರೆ ಸರ್ಕಾರಿ ಭೂಮಿಯಲ್ಲಿ ಅತ್ಯಾಧುನಿಕ ಅಂತರರಾಷ್ಟ್ರೀಯ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು ನಿಜವೇ: | ಹೌದು |
| ಈ) | ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ | ಬೆಳಗಾವಿ ಜಿಲ್ಲೆಯ ಯಳ್ಳೂರು ಗ್ರಾಮದಲ್ಲಿ ಕ್ರೀಡಾಂಗಣವನ್ನು ನಿರ್ಮಿಸಲು ಯುವ ಸಬಲೀಕರಣ ಮತ್ತು |

| | | |
|---|---|---|
| | ಪ್ರಾರಂಭಿಸಲಾಗುವುದು ಮತ್ತು ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು: | ಕ್ರೀಡಾ ಇಲಾಖೆಗೆ ನಿವೇಶನ ಹಸ್ತಾಂತರವಾಗಿರುವುದಿಲ್ಲ.<br><br>ಬೆಳಗಾವಿ ತಾಲ್ಲೂಕಿನ ಯಳ್ಳೂರು ಗ್ರಾಮದಲ್ಲಿ ಕ್ರೀಡಾ ಸಂಕೀರ್ಣ ನಿರ್ಮಿಸಲು ಜಿಲ್ಲಾಧಿಕಾರಿಗಳು, ಬೆಳಗಾವಿ ಇವರ ದಿನಾಂಕ:13-12-2022ರ ಆದೇಶದಲ್ಲಿ ಯಳ್ಳೂರು ಗ್ರಾಮದ ರಿ.ಸ.ನಂ.1142 ರಲ್ಲಿನ 66 ಎಕರೆ 17 ಗುಂಟೆ ಪೈಕಿ 40 ಎಕರೆ ಜಮೀನನ್ನು ಕರ್ನಾಟಕದ ಮೇಲ್ಮನವಿ ನ್ಯಾಯಾಧೀಕರಣದ ತಡೆಯಾಜ್ಞೆ ಇರುವ ರಿ.ಸ.ನಂ.1142/ಬ ರಲ್ಲಿ 05 ಎಕರೆ ಕ್ಷೇತ್ರದ ಜಮೀನನ್ನು ಹೊರತುಪಡಿಸಿ (1) ಇಂದಿರಾ ಆವಾಸ್ ಯೋಜನೆ ಮನೆಗಳು=00ಎ-20ಗು (2) ಸರ್ಕಾರಿ ಕಿರಿಯ ಪ್ರಾಥಮಿಕ ಮರಾಠಿ ಶಾಲೆ=02ಎ-00ಗು (3) ಪ್ರಾಥಮಿಕ ಆರೋಗ್ಯ ಕೇಂದ್ರ=00ಎ-20ಗು (4) ಸಿದ್ಧಕಲಾ ಟ್ರಸ್ಟ್ ಕಟ್ಟಡ=02ಎ-00ಗು (5) ಘನತ್ಯಾಜ್ಯ ನಿರ್ವಹಣೆ ಘಟಕ ಜಾಗ=00ಎ-20ಗು ಹಾಗೂ (6) ಅನಧಿಕೃತ ಮನೆ ಕಟ್ಟಡಗಳು, ಇವುಗಳನ್ನು ಸ್ಥಳಾಂತರಿಸುವ ಷರತ್ತಿಗೊಳಪಟ್ಟು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಉಚಿತವಾಗಿ ಮಂಜೂರು ಮಾಡಲಾಗಿರುತ್ತದೆ.<br><br>ಜಮೀನು ಮಂಜೂರಾತಿ ಆದೇಶದಲ್ಲಿ ತಿಳಿಸಿರುವಂತೆ ನಿವೇಶನದಲ್ಲಿರುವ ಕಟ್ಟಡಗಳನ್ನು ಸ್ಥಳಾಂತರಿಸಿದ ನಂತರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸಿದಲ್ಲಿ, ಮುಂದಿನ ಕ್ರಮ ವಹಿಸಲಾಗುವುದು. |
| ಉ) | ಬೆಳಗಾವಿ ನಗರದಲ್ಲಿ ವತಿಯಿಂದ ಈ ಹಿಂದೆ ಆಟೋ ನಗರ, ಕನ್ನಬರಗಿಯಲ್ಲಿ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಿ ಬೆಳಗಾವಿ ಜಿಲ್ಲೆ ಯುವಕರಿಗೆ ಕ್ರಿಕೆಟ್ ಕ್ರೀಡೆಯಲ್ಲಿ ಹೆಚ್ಚಿನ ಅವಕಾಶಗಳನ್ನು ನೀಡಲು ಯೋಜಿಸಿದ್ದು, ಸದರಿ ಕ್ರೀಡಾಂಗಣದ ಪ್ರಸ್ತುತ ಹಂತವೇನು: | ಬೆಳಗಾವಿ ನಗರದ ಕನ್ನಬರಗಿಯಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲಾಗಿರುವುದಿಲ್ಲ. ಸದರಿ ಕ್ರೀಡಾಂಗಣವನ್ನು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ವತಿಯಿಂದ ನಿರ್ಮಿಸಲಾಗಿದ್ದು, ಸಾರ್ವಜನಿಕರ ಬಳಕೆಯಲ್ಲಿದ್ದು, ಈ ಕ್ರೀಡಾಂಗಣವು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವ್ಯಾಪ್ತಿಗೊಳಪಡುವುದಿಲ್ಲ. |
| ಊ) | ಸದರಿ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುತ್ತದೆ? (ಮಾಹಿತಿ ನೀಡುವುದು) | ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/13/2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ,

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 213
ಉತ್ತರಿಸಬೇಕಾದ ದಿನಾಂಕ : 06.03.2025
ಸದಸ್ಯರ ಹೆಸರು : ಶ್ರೀ ಸಿ.ಟಿ ರವಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡಬೇಕೆನ್ನುವ ಸಾರ್ವಜನಿಕರ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಹಾಗಿದ್ದಲ್ಲಿ, ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ; ಇದ್ದರೆ ಯಾವ ಹಂತದಲ್ಲಿದೆ. | ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡುವ ಪ್ರಸ್ತಾವನೆ ಪ್ರಸ್ತುತ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಮುಂದಿರುವುದಿಲ್ಲ. |
| ಇ) | ಇದಕ್ಕಾಗಿ ಜಾಗ ಗುರುತಿಸಲಾಗಿದೆಯೆ; ಗುರುತಿಸಿದ್ದರೆ, ಎಲ್ಲಿ ಎಷ್ಟು ಜಾಗವನ್ನು ಗುರುತಿಸಿ ಕಾಯ್ದಿರಿಸಲಾಗಿದೆ; (ವಿವರ ಒದಗಿಸುವುದು) | ಚಿಕ್ಕಮಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿ ಸೂಕ್ತ ಸರ್ಕಾರಿ ನಿವೇಶನವನ್ನು ಗುರುತಿಸಲು ಕಂದಾಯ ಇಲಾಖೆಯಿಂದ ಕ್ರಮವಹಿಸಲಾಗುತ್ತಿದೆ. |
| ಈ) | ಯಾವ ಕಾಲ ಮಿತಿಯಲ್ಲಿ ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡಲಾಗುವುದು? | ಪ್ರಸ್ತುತ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಕ್ರೀಡಾಂಗಣಗಳಿಲ್ಲದಿರುವ ಜಿಲ್ಲಾ/ತಾಲ್ಲೂಕು ಕೇಂದ್ರಗಳಲ್ಲಿ ಹೊಸದಾಗಿ ಕ್ರೀಡಾಂಗಣಗಳನ್ನು ನಿರ್ಮಿಸಲು ಆದ್ಯತೆ ನೀಡಲಾಗುತ್ತಿದೆ. ಚಿಕ್ಕಮಗಳೂರು ನಗರದಲ್ಲಿ ಒಳಾಂಗಣ ಕ್ರೀಡಾಂಗಣ ಸಿಂಥೆಟಿಕ್ ಫುಟ್ ಬಾಲ್ ಟರ್ಫ್, ಈಜುಕೊಳ ಹಾಗೂ ವಿವಿಧ ಕ್ರೀಡಾ ಅಂಕಣಗಳನ್ನೊಳಗೊಂಡ ಜಿಲ್ಲಾ ಕ್ರೀಡಾಂಗಣವನ್ನು ಈಗಾಗಲೇ ನಿರ್ಮಿಸಲಾಗಿರುತ್ತದೆ.<br><br>ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡುವ ಪ್ರಸ್ತಾವನೆ ಪ್ರಸ್ತುತ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಮುಂದಿರುವುದಿಲ್ಲ. |

ವೈಎಸ್ ಡಿ-ಇಬಿಬಿ/17/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 255 |
| ಉತ್ತರಿಸಬೇಕಾದ ದಿನಾಂಕ | : | 06.03.2025 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ಕ್ರೀಡಾ ಹಾಸ್ಟೆಲ್‌ಗಳು ಕಾರ್ಯ ನಿರ್ವಹಿಸುತ್ತಿವೆ ಹಾಗೂ ಸದರಿ ಕ್ರೀಡಾ ಹಾಸ್ಟೆಲ್‌ಗಳಿಗೆ ಮಂಜೂರಾಗಿರುವ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಂದು ಕ್ರೀಡಾ ಹಾಸ್ಟೆಲ್ ಮಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಸದರಿ ಕ್ರೀಡಾ ವಸತಿ ನಿಲಯಕ್ಕೆ ಯಾವುದೇ ಖಾಯಂ ಹುದ್ದೆಗಳು ಮಂಜೂರಾಗಿರುವುದಿಲ್ಲ ಹಾಗೂ ಯಾವುದೇ ಹುದ್ದೆಗಳು ಖಾಲಿ ಇರುವುದಿಲ್ಲ.<br>ಕರ್ನಾಟಕ ಕ್ರೀಡಾ ಪ್ರಾಧಿಕಾರದ ಒಬ್ಬ ಅಥ್ಲೆಟಿಕ್ಸ್ ತರಬೇತುದಾರರು ಈ ಕ್ರೀಡಾ ವಸತಿ ನಿಲಯದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.<br>ಪ್ರಸ್ತುತ ಕ್ರೀಡಾ ವಸತಿ ನಿಲಯದಲ್ಲಿ ಒಬ್ಬರು ಕ್ಷೇಮಪಾಲಕರು, ಒಬ್ಬರು ಸ್ವಚ್ಛತಾಗಾರರು ಹಾಗೂ ಇಬ್ಬರು ಕಾವಲುಗಾರರು ಸೇರಿದಂತೆ ಒಟ್ಟು 4 ಸಿಬ್ಬಂದಿಗಳು ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. |
| ಆ) | ಈ ಎಲ್ಲಾ ಕ್ರೀಡಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹೊಂದಿವೆಯೆ; ಹಾಗೂ ಅವುಗಳಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ; | ಮಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ರೀಡಾ ವಸತಿ ನಿಲಯವು ಬಾಲಕ:ಬಾಲಕಿಯರಿಗೆ ಪ್ರತ್ಯೇಕ ವಸತಿ ವ್ಯವಸ್ಥೆ ಇರುವ ಸ್ವಂತ ಕಟ್ಟಡಗಳನ್ನು ಹೊಂದಿದೆ.<br><br>ಸದರಿ ಕ್ರೀಡಾ ವಸತಿ ನಿಲಯದಲ್ಲಿ ವಸತಿ ಕೊಠಡಿಗಳು, ಭೋಜನಾಲಯ, ವಿದ್ಯುತ್, ನೀರು, ಶೌಚಾಲಯ, ಸ್ನಾನಗೃಹ ಮತ್ತಿತರ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಹಾಗೂ ಮಂಚ, ಹಾಸಿಗೆ, ಹೊದಿಕೆಗಳು, ಕುಡಿಯುವ ನೀರು, ಸೋಲಾರ್ ವಾಟರ್ ಹೀಟರ್, ವಾಷಿಂಗ್ ಮೆಷೀನ್, ಡೈನಿಂಗ್ ಟೇಬಲ್, ಸಿ.ಸಿ.ಟಿ.ವಿ. ಕಣ್ಗಾವಲು ವ್ಯವಸ್ಥೆ ಕಲ್ಪಿಸಲಾಗಿದೆ. ಕಾವಲುಗಾರರು, ಕ್ಷೇಮಪಾಲಕರು ಮತ್ತು ಸ್ವಚ್ಛತಾಗಾರರ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿದೆ. |

| | | |
|---|---|---|
| ಇ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವೆಷ್ಟು; ಹಾಗೂ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಮಂಗಳೂರಿನ ಕ್ರೀಡಾ ವಸತಿ ನಿಲಯದಲ್ಲಿ 50 ವಿದ್ಯಾರ್ಥಿಗಳ ದಾಖಲಾತಿ ಸಾಮರ್ಥ್ಯವಿರುತ್ತದೆ. ಪ್ರಸ್ತುತ 26 ಬಾಲಕರು ಹಾಗೂ 18 ಬಾಲಕಿಯರು ಸೇರಿದಂತೆ ಒಟ್ಟು 44 ಕ್ರೀಡಾಪಟುಗಳು ದಾಖಲಾಗಿರುತ್ತಾರೆ. |
| ಈ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು ಹಾಗೂ ತರಬೇತಿಗಳು ಯಾವುವು? (ವಿವರ ನೀಡುವುದು) | ಮಂಗಳೂರಿನ ಕ್ರೀಡಾ ವಸತಿ ನಿಲಯದಲ್ಲಿ ದಾಖಲಾಗಿರುವ ಕ್ರೀಡಾಪಟುಗಳಿಗೆ ಉಚಿತ ವಸತಿ, ಊಟೋಪಹಾರ, ಕ್ರೀಡಾ ಸಮವಸ್ತ್ರ, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ಭತ್ಯೆ/ದಿನ ಭತ್ಯೆ ಸೌಲಭ್ಯ ಒದಗಿಸಲಾಗುತ್ತಿದೆ. ವೈಜ್ಞಾನಿಕ ಕ್ರೀಡಾ ತರಬೇತಿಗೆ ಅಗತ್ಯವಾದ ಕ್ರೀಡಾ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತಿದೆ.<br>ರಾಷ್ಟ್ರೀಯ ಹಾಗೂ ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪ್ರೋತ್ಸಾಹಧನ ನೀಡಲಾಗುತ್ತಿದೆ. |

ವೈಎಸ್ ಡಿ-ಇಬಿಬಿ/15/2025

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ